ಅ) ಮಾನ್ಯ ಕಂದಾಯ ಸಚಿವರು ಈ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳುವುದಾಗಿ ತಿಳಿಸಿರುವುದು ನಿಜವಲ್ಲವೆ. ಹಾಗೂ ಈ ಬಗ್ಗೆ ಬಳ್ಳಾರಿ ಜಿಲ್ಲಾಧಿಕಾರಿಯವರಿಂದ ಸರ್ಕಾರಕ್ಕೆ ಜ್ಞಾಪನ ಪತ್ರ ಬಂದಿರುವುದು ನಿಜವೆ?

ಇ) ಹಾಗಿದ್ದಲ್ಲಿ ಈ ಬಗ್ಗೆ ಮಾಸಾಶನವನ್ನು ಜಿಲ್ಲೆಯ ಉಳಿದ ಪಟೇಲರಿಗೆ ಕೂಡಲೇ ಮಂಜೂರು ಮಾಡಲು ಸರ್ಕಾರದವರು ಕ್ರಮ ಕೈಗೊಳ್ಳುವರೆ?

ಶ್ರೀ ಎಸ್. ಆರ್. ಬೊಮ್ಮಾಯಿ (ಕಂದಾಯ ಮತ್ತು ಯೋಜನಾ ಮಂತ್ರಿಗಳು).—

ಅ) ಹೌದು.

ಆ) ಹೌದು.

ಇ) ವಿಷಯಕ್ಕೆ ಸಂಬಂಧಿಸಿದಂತೆ ಪ್ರಸ್ತಾವನೆಯು ಸರ್ಕಾರದ ಸಕ್ರಿಯ ಪರಿಶೀಲನೆಯಲ್ಲಿದೆ.

ಮನೆ ಬಾಡಿಗೆ ನಿಯಂತ್ರಣದ ಬಗ್ಗೆ

೧೩೦ (೨೮) ಶ್ರೀ ಕೆ. ಎಚ್. ಪಾಟೀಲ್ (ಗದಗ್).—ಮಾನ್ಯ ಕಂದಾಯ ಮತ್ತು ಯೋಜನಾ ಸಚಿವರು ಈ ಕೆಳಕಂಡ ಪ್ರಶ್ನೆಗೆ ದಯೆಯಿಟ್ಟು ಉತ್ತರಿಸುವರೇ :—

ಮನೆ ಬಾಡಿಗೆ ನಿಯಂತ್ರಣದ ಮನೆಗಳಲ್ಲಿ ವಾಸಿಸುತ್ತಿರುವ ಬಾಡಿಗೆದಾರರಿಗೆ ಸ್ವಂತ ಹಕ್ಕುಗಳನ್ನು ನೀಡಲು ಒಂದು ಕಾನೂನು ತರಲು ಸರ್ಕಾರವು ಯೋಚಿಸುತ್ತಿದೆಯೆ?

ಶ್ರೀ ಎಸ್. ಆರ್. ಬೊಮ್ಮಾಯಿ (ಕಂದಾಯ ಮತ್ತು ಯೋಜನಾ ಸಚಿವರು).—

ಇಲ್ಲ.

ಕೇಂದ್ರ ಸರ್ಕಾರದ ಕೈಗಾರಿಕಾ ವಿವಾದ ಕಾಯ್ದೆ ಬಗ್ಗೆ

೧೩೧ (೩೯೪) ಶ್ರೀ ಟಿ. ಎಸ್. ಮಣಿ (ಕೆ. ಜಿ. ಎಫ್).—ಮಾನ್ಯ ಕಾರ್ಮಿಕ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೇ:—

೧) ಕೇಂದ್ರ ಸರ್ಕಾರದವರು ಕೈಗಾರಿಕಾ ವಿವಾದ ಕಾಯ್ದೆ ಮತ್ತು ಕಾರ್ಮಿಕ ಸಂಘಗಳ ಅಧಿನಿಯಮ (ಟ್ರೇಡ್ ಯೂನಿಯನ್ ಆಕ್ಟ್) ಗಳಿಗೆ ತಿದ್ದುಪಡಿ ಮಾಡಲು ಪ್ರಯತ್ನಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

೨) ಹಾಗಿದ್ದರೆ, ಕಾರ್ಮಿಕ ಮಂತ್ರಿಗಳ ಸಮ್ಮೇಳನ ಹಾಗೂ ಇಂಡಿಯನ್ ಕಾರ್ಮಿಕ ಸಮ್ಮೇಳನದಲ್ಲಿ ರಾಜ್ಯ ಸರ್ಕಾರ ತೆಗೆದುಕೊಂಡ ನಿಲುವು ಏನು?

೩) ತಿದ್ದುಪಡಿಯ ಬಗ್ಗೆ ಕೇಂದ್ರ ಸರ್ಕಾರ ರಾಜ್ಯ ಸರ್ಕಾರದೊಂದಿಗೆ ಸಮಾಲೋಚಿಸಿದೆಯೇ, ಮತ್ತು ಹಾಗಿದ್ದರೆ ಈ ಬಗ್ಗೆ ರಾಜ್ಯ ಸರ್ಕಾರದ ಅಭಿಪ್ರಾಯವೇನು?

ಶ್ರೀ ಎಸ್. ಕೆ. ಕಾಂತಾ (ಕಾರ್ಮಿಕ ಸಚಿವರು).—

೧) ಇಲ್ಲ.
೨) ಇಲ್ಲ.
೩) ಉದ್ಭವಿಸುವುದಿಲ್ಲ.

ಸರ್ಕಾರಿ ಸೇವೆಗೆ ಸೇರಿಸಿ ಕೊಳ್ಳಬೇಕಾಗಿರತಕ್ಕ ಸ್ವೀಪ್ಸ್ ಪಂಡರೀ ಪದವೀಧರರ ಬಗ್ಗೆ

೧೩೨ (೪೨) ಶ್ರೀ ಆರ್. ವೆಂಕಟರಾಮಯ್ಯ (ಮುಳಬಾಗಿಲು).—ಮಾನ್ಯ ಸಮಾಜ ಕಲ್ಯಾಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೇ:—

ಅ) ಸರ್ಕಾರಿ ಸೇವೆಗೆ ಸೇರಿಸಿಕೊಳ್ಳಬೇಕಾಗಿರತಕ್ಕ ಸ್ವೀಪ್ಸ್ ಪಂಡರೀ ಪದವೀಧರರ ಸಂಖ್ಯೆ ಎಷ್ಟು? (ಜಿಲ್ಲಾವಾರು ಮಾಹಿತಿಯನ್ನು ಒದಗಿಸುವುದು)

ಆ) ಸರ್ಕಾರವು ಅನೇಕ ಬಾರಿ ಇವರನ್ನು ಸರ್ಕಾರಿ ಸೇವೆಗೆ ನೇಮಕ ಮಾಡಿಕೊಳ್ಳಲು ಆಶ್ವಾಸನೆ ನೀಡಿರುವುದು ವಾಸ್ತವಾಂಶವೇ ?

ಇ) ಹಾಗಾದರೆ, ಇವರುಗಳನ್ನು ಸರ್ಕಾರದ ಸೇವೆಗೆ ಯಾವಾಗ ಸೇರಿಸಿಕೊಳ್ಳಲಾಗುವುದು ?